



ಅರುಣ ಪಿ. ಭಟ್ಟ

## ವಾರಭವಿಷ್ಯ 10.02.2022ರಿಂದ 16.02.2022ರವರೆಗೆ




ಮಕ್ಕಳ ಬಗ್ಗೆ ನಿಮ್ಮ ಗಮನ ಹಾಗೂ ಅವರ ಪರಿಸರವನ್ನು ನೀವು ಉತ್ತಮವಾಗಿಟ್ಟುಕೊಳ್ಳುವ ಮನಸ್ಥಿತಿಯನ್ನು ರೂಪಿಸುವುದು ಒಳ್ಳೆಯದು. ಶ್ರಮದ ಕೆಲಸಗಳಿಂದ ಸಾರ್ಥಕತೆಯ ಭಾವನೆ ನಿಮ್ಮಲ್ಲಿ ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಸಹೋದ್ಯೋಗಿಗಳ ಜತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಶುಭದಿನ 12. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ನೀವು ಮಾಡುವ ಕೆಲಸದಲ್ಲಿ ಉತ್ತಮ ಫಲಿತಾಂಶ ಹಾಗೂ ಆದಾಯ ವೃದ್ಧಿಯಾಗಲಿದೆ. ವಾರವಿಡಿ ನಿಮ್ಮ ಮೇಲಧಿಕಾರಿಗಳ ಇಲ್ಲವೆ ಮನೆಯ ಹಿರಿಯರ ಒಲುಮೆ ಗಳಿಸಿಕೊಳ್ಳುವಿರಿ. ನಿಮ್ಮ ನಡತೆಯು ಹೆಚ್ಚು ಪ್ರಶಂಸೆಗೆ ಒಳಪಡುವುದು. ಮಂಗಲ ಕಾರ್ಯದಲ್ಲಿ ಭಾಗಿಯಾಗುವಿರಿ ಅಥವಾ ನೀವೇ ನೆರವೇರಿಸುವಿರಿ. ಪರಿವಾರದವರಿಂದ ಸಂತಸ ನೆಮ್ಮದಿ. ಶುಭದಿನ 11. ಆದಿತ್ಯ ಹೃದಯ ಪಠಿಸಿರಿ.




ನಿಮ್ಮಲ್ಲಿನ ಜಡತ್ವ ಕರಗಿ ಹೋಗಲಿದೆ. ನಿಮ್ಮ ವಿನಯದ ಸ್ವಭಾವದಿಂದ ಹೆಚ್ಚಿನ ಹೆಸರು ಸಂಪಾದನೆ ಮಾಡಲಿದ್ದೀರಿ. ಸಂಗಾತಿಯ ಬಯಕೆಗಳಿಗೆ ನೀವು ಸಮ್ಮತಿಯ ವಾಗ್ದಾನ ನೀಡಲಿದ್ದೀರಿ. ಮಕ್ಕಳ ಕೆಲವು ವರ್ತನೆಗಳು ನಿಮ್ಮ ಮನದಲ್ಲಿ ಬೇಸರ ತರಿಸಲಿದೆ, ಆದಷ್ಟು ಅವರನ್ನು ಸರಿಪಡಿಸಲು ಯೋಜನೆ ರೂಪಿಸಬೇಕಾದ ಅನಿವಾರ್ಯತೆ ಕಂಡುಬರುತ್ತದೆ. ಶುಭದಿನ 14. ಸೌಂದರ್ಯ ಲಹರಿ ಪಠಿಸಿರಿ.




ಕೆಲಸದಲ್ಲಿ ತೊಂದರೆ ಬರಬಹುದಾಗಿದೆ. ಕೆಲವು ಕಾರ್ಯಗಳನ್ನು ನೀವೇ ಸ್ವತಃ ನಿಂತು ಮಾಡುವುದು ಒಳಿತು. ಸಾಲ ವಸೂಲಾತಿ ನಿಮ್ಮ ನಿರೀಕ್ಷೆಯಲ್ಲಿ ಹುಸಿಯಾಗಲಿದೆ. ಬರುವಂತ ಆರ್ಥಿಕ ಮೂಲಗಳು ತಡೆಯಾಗುವ ಸಾಧ್ಯತೆ ಕಂಡುಬರುತ್ತದೆ. ನಿಮ್ಮ ಬುದ್ಧಿ ಬಲದಿಂದ ಪದೋನ್ನತಿ ಸಿಗುವುದು. ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ಚಿಂತನೆ ನಡೆಸುವಿರಿ. ಶುಭದಿನ 11. ಕಾಲಭೈರವನ ಆರಾಧನೆ ಮಾಡಿರಿ.




ವಿವೇಚನಾರಹಿತ ಹೂಡಿಕೆಗಳಿಂದ ನಷ್ಟ ಆಗುವ ಸಂಭವ. ನಿಮ್ಮದೇ ವಿಚಾರಗಳು ನಡೆಯಬೇಕೆಂಬ ವಾದವು ಅತಿಶಯೋಕ್ತಿಯಾಗಿ ಕಾಣಬಹುದು. ಎಲ್ಲರ ಮಾತಿಗೆ ಪ್ರಾಧಾನ್ಯತೆ ನೀಡಿ ಮುನ್ನಡೆಯಿರಿ. ನಿಮ್ಮಲ್ಲಿ ಹೊಳೆಯುವ ಆಲೋಚನೆ ಉತ್ತಮ ಪರಿಕಲ್ಪನೆಯಾಗಿದ್ದು ಇದರಿಂದ ಅನುಕೂಲಗಳು ಕಾಣಸಿಗಲಿದೆ. ನಿಮ್ಮ ಭರವಸೆ ಕಾರ್ಯರೂಪಕ್ಕೆ ಬರುವುದು. ಶುಭದಿನ 12. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ




ಹಿರಿಯರ ಬಗ್ಗೆ ಗೌರವ ನೀಡುವುದು ಒಳ್ಳೆಯದು. ಉತ್ತಮ ಆರ್ಥಿಕ ಗಳಿಕೆ ಇದ್ದರು ಸಹ ಕೆಲವೊಂದು ವಿಷಯಗಳಲ್ಲಿ ನಿಮ್ಮ ದುಡುಕುತನ ದೊಡ್ಡಪೆಟ್ಟನ್ನು ನೀಡಬಹುದಾಗಿದೆ. ಮನಸ್ಸು ಮರ್ಕಟವಿದ್ದಂತೆ ನಿಮ್ಮ ಮನೋಕಾಮನೆಗಳನ್ನು ಆದಷ್ಟು ನಿಯಂತ್ರಣ ಮಾಡುವುದು ಒಳ್ಳೆಯದು. ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆಗಳು ಕಂಡುಬರುತ್ತದೆ. ಶುಭದಿನ 13. ಹನುಮಾನ್ ಚಾಲಿಸ್ ಪಠಿಸಿರಿ.




ಕೆಲಸದಲ್ಲಿ ಹೆಚ್ಚಿನ ವಿಳಂಬದಿಂದ ನಿಮ್ಮ ಬಗ್ಗೆ ಹಲವರು ಹಲವು ಮಾತುಗಳನ್ನಾಡುವರು. ಕೆಲ ವಿಚಾರದಲ್ಲಿ ಅತಿಯಾದ ಆಸಕ್ತಿ ತೋರಿಸುವುದು ಒಳ್ಳೆಯದಲ್ಲ. ಯೋಜನೆಗಳ ವಿಸ್ತರಣೆಗೆ ಅವಕಾಶಗಳು ಸಿಗುವ ಸಾಧ್ಯತೆ ಕಂಡುಬರುತ್ತದೆ. ಟೀಕಿಸುವಂತಹ ಜನರ ಕುರಿತು ಆತಂಕ ಪಡಬೇಕಾಗಿಲ್ಲ. ನಿಮ್ಮ ಸುತ್ತಮುತ್ತಲ ಜನರೇ ನಿಮ್ಮನ್ನು ಅಡ್ಡಹಾದಿಗೆ ಎಳೆಯುತ್ತಿರುವರು. ಶುಭದಿನ 10. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.




ಆರ್ಥಿಕವಾಗಿ ಬೆಳವಣಿಗೆ ಸಾಧಿಸುವಿರಿ. ರಾಜಿ ಪಂಚಾಯಿತಿಗಳಿಗೆ ಹೋಗದಿರುವುದು ತುಂಬಾ ಸೂಕ್ತ. ಸುಖಾಸುಮ್ಮನೆ ಕದನಕ್ಕೆ ಬರುವಂತಹ ಜನ ಕಂಡುಬರುತ್ತಾರೆ. ಸಂಗಾತಿಯ ಜೊತೆಗೆ ಖರೀದಿ ಪ್ರಕ್ರಿಯೆಗಳನ್ನು ಮಾಡಲು ಇಚ್ಛಿಸುತ್ತೀರಿ. ಮುಷ್ಟಿ ಕಾಳು ಚೆಲ್ಲಿ ಮೂಟೆ ಕಾಳನ್ನು ಪಡೆಯುವಂತೆ ನಿಮ್ಮ ಹಣ ಖರ್ಚಾಗುವುದು. ಶುಭದಿನ 16. ಮಹಾಗಣಪತಿಗೆ ದೂರ್ವಾರ್ಚನೆ ಮಾಡಿರಿ.




ನಿಮ್ಮ ಸಾಮರ್ಥ್ಯವನ್ನು ಸಂಪೂರ್ಣ ಬಳಸಿಕೊಳ್ಳುತ್ತೀರಿ. ಆ ಮೂಲಕ ಹಲವು ಕಾರ್ಯಗಳನ್ನು ಪೂರ್ಣಗೊಳಿಸುತ್ತೀರಿ. ನಿಮ್ಮ ಸಾಮಾಜಿಕ ಸ್ಥಾನಮಾನದಲ್ಲಿ ಏರಿಕೆ ಆಗಲಿದೆ. ವಾರದ ಅಂತ್ಯಕ್ಕೆ ಸರಿಯುತ್ತಾ ದೈಹಿಕ ನೋವುಗಳು ಕಾಡುತ್ತವೆ. ಸಂಬಂಧಿಕರ ಜತೆ ಅನಗತ್ಯವಾದ ವಿವಾದ ಏರ್ಪಡುತ್ತದೆ. ದೈಹಿಕ ಮತ್ತು ಮಾನಸಿಕ ಸಮತೋಲನವನ್ನು ಕಾಪಾಡಿಕೊಳ್ಳಿ. ಶುಭದಿನ 11. ಚಂಡಿ ಪಾರಾಯಣ ಮಾಡಿರಿ.




ಹೊಸ ಯೋಜನೆಗೆ ಈ ವಾರ ಸಿದ್ಧತೆ ನಡೆಯುವುದು. ಕೃಷಿ ಚಟುವಟಿಕೆಗಳಲ್ಲಿ ಉತ್ತಮ ಬೆಳವಣಿಗೆ ಕಂಡುಬರುತ್ತದೆ. ಆರ್ಥಿಕ ಸಹಕಾರವನ್ನು ಆತ್ಮೀಯರ ಬಳಿ ಪಡೆಯುವ ಸಾಧ್ಯತೆ ಇದೆ. ಅತ್ಯಂತ ಚುರುಕುತನದಿಂದ ಇದ್ದ ನೀವು ಆಲಸ್ಯತನ ತೋರುವುದರಿಂದ ಕೆಲಸ ಕಾರ್ಯಗಳಲ್ಲಿ ಹಿನ್ನಡೆಯನ್ನು ಅನುಭವಿಸಬೇಕಾಗುವುದು. ಸಂಬಂಧಗಳಲ್ಲಿ ಸಂತಸ ಇರುತ್ತದೆ. ಶುಭದಿನ 13. ಮಾರುತಿ ಉಪಾಸನೆ ಪೂಜೆ ಮಾಡಿರಿ.




ಈ ವಾರ ಸೋಲಿನಿಂದ ಗೆಲುವಿನ ಕಡೆಗೆ ಪ್ರಯಾಣ ಬೆಳೆಸುವಿರಿ. ಸಂತೋಷದ ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ. ಕುಟುಂಬದಲ್ಲಿ ಅನಿರೀಕ್ಷಿತವಾಗಿ ಸಂಕಷ್ಟ ಎದುರಾಗಬಹುದು. ದೃಢಮನಸ್ಸಿನಿಂದ ಕಾರ್ಯಗಳಲ್ಲಿ ಸಫಲರಾಗುವಿರಿ. ಸಮಸ್ಯೆಗಳ ಸುಳಿವಿನಿಂದ ಹೊರಬರಲು ಪ್ರಯತ್ನ ಮೆಚ್ಚುವಂತದ್ದು. ಮನೆಗೆ ನೆಂಟರಿಷ್ಟರ ಆಗಮನ ಸಾಧ್ಯತೆ. ಶುಭದಿನ 14. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಕೌಟುಂಬಿಕ ಸಮಸ್ಯೆಗಳು ಸರಿಹೋಗಲಿದೆ. ಉದ್ಯೋಗದ ಸ್ಥಿತಿಗತಿಗಳು ಚೇತರಿಕೆಯತ್ತ ಸಾಗುತ್ತದೆ. ನಿಮ್ಮ ಕ್ರಿಯಾಶೀಲತೆಯಿಂದ ಹೊಸತಾದ ಕಲ್ಪನೆಗಳೊಂದಿಗೆ ಸಾಗುವಿರಿ. ಉದ್ಯೋಗದಲ್ಲಿ ಪ್ರಗತಿ ಸಾಧ್ಯತೆ ಇದೆ. ಯಶಸ್ವಿ ದಾಯಕ ನಿರ್ಣಯಗಳಿಂದ ಸ್ಥಾನ ಗಟ್ಟಿಗೊಳಿಸಿಕೊಳ್ಳುವಿರಿ. ಹಣಕಾಸಿನ ವ್ಯವಹಾರದಲ್ಲಿ ಹೆಚ್ಚಿನ ಪ್ರಶಂಸೆಯನ್ನು ತಂದುಕೊಡುವುದು. ಶುಭದಿನ 15. ವಿಷ್ಣು ಸಹಸ್ರನಾಮ ಮಾಡಿರಿ.